# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ: 03.10.2020 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ಎ. ಬಿ. ದೊಡ್ಡಯ್ಯ, (ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಎ. ಬಿ. ದೊಡ್ಡಯ್ಯ | ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ಅಜಗಣ್ಣಯ್ಯ ಸ್ವಾಮಿ | ಸಹಾಯಕ ಅಭಿಯಂತರರು |
| 3 | ಡಾ|| ಚೇತನ್ | ವೈದ್ಯಾಧಿಕಾರಿಗಳು |
| 4 | ಶ್ರೀ ಸೋಮಶೇಖರ್ ಎಸ್. | ಕಿ. ಆ. ಪ. |
| 5 | ಮೊಹಮ್ಮದ್ | ಬಿ.ಡಬ್ಲ್ಯು.ಎಸ್.ಎಸ್.ಬಿ. |
| 6 | ಶ್ರೀ ಡಬ್ಲ್ಯು. ರುದ್ರ | ಬಿ.ಡಬ್ಲ್ಯು.ಎಸ್.ಎಸ್.ಬಿ. |
| 7 | ಶ್ರೀ ಎಂ. ಮೋಪುರಿ | ಎ.ಎಸ್.ಐ., ಜಾಲಹಳ್ಳಿ ಪೋಲೀಸ್ ಠಾಣೆ |
| 8 | ಶ್ರೀ ಆಶೀರ್ವಾದ | 17/ಬಿ. ಮೇಲ್ವಿಚಾರಕರು |
| 9 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು |
| 10 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು |
| 11 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು |
| 12 | ಶ್ರೀ ಮುರಳಿ | ಮೇಲ್ವಿಚಾರಕರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-

- ಮತ್ತಿಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಮತ್ತಿಕೆರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವಯಂ ಪ್ರೇರಿತರಾಗಿ ರೋಗ ಲಕ್ಷಣಗಳಿರುವ ಸುಮಾರು 65 ಜನರಿಗೆ ಹಾಗೂ ಇತರ ಪ್ರದೇಶಗಳಲ್ಲಿ ಸುಮಾರು 185 ರಿಂದ 200 ಜನರಿಗೆ ಪ್ರತಿದಿನ ಕೋವಿಡ್ ಪರೀಕ್ಷೆ ನಡೆಸುತ್ತಿರುವುದಾಗಿ ಹಾಗೂ ಇದನ್ನು 300ಕ್ಕೆ ಹೆಚ್ಚಿಸುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಅಧ್ಯಕ್ಷರು ಮಾತನಾಡಿ, ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರದ ಜೊತೆಗೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸ್ಥಳಗಳಾದ ಚೌಡೇಶ್ವರಿ ಬಸ್ ನಿಲ್ದಾಣದ ಹತ್ತಿರ, ಸುಂದರ ನಗರ ಪಾರ್ಕ್ ಹತ್ತಿರ, ಮುತ್ಯಾಲಮ್ಮ ದೇವಸ್ಥಾನದ ಹತ್ತಿರ ಮತ್ತು ಗಣೇಶ ಗುಡಿ ಮೈದಾನದ ಹತ್ತಿರ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ಹೆಚ್ಚಿನ ಪರೀಕ್ಷೆ ನಡೆಸುವಂತೆ ಸೂಚಿಸಿದರು.

ಮು.ತಿ.ನೋ....2

Scanned with CamScanner

ಕಡ್ಡಾಯವಾಗಿ ಮಾಸ್ಕ್ ಧರಿಸುವಂತೆ ಜನಜಾಗೃತಿ ಮೂಡಿಸಲು ಧ್ವನಿವರ್ಧಕವಿರುವ ಆಟೋಗಳಲ್ಲಿ ಸಾಯಂಕಾಲ 5 ರಿಂದ 7 ಗಂಟೆಯವರೆಗೆ ಜನ ನಿಬಿಡ ಪ್ರದೇಶಗಳಲ್ಲಿ ಪ್ರಚಾರ ಮಾಡಲು ವ್ಯವಸ್ಥೆ ಮಾಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯದ ಗುತ್ತಿಗೆದಾರರಿಗೆ ಸೂಚಿಸಿದರು. ಜೊತೆಗೆ ಬೀದಿ ಬೀದಿಗಳಲ್ಲಿ ತಳ್ಳುವ ಗಾಡಿ ಮತ್ತು ಇತರೆ ವಾಣಿಜ್ಯ ಚಟುವಟಿಕೆದಾರರಿಗೆ ತ್ಯಾಜ್ಯವನ್ನು ಸೂಕ್ತವಾಗಿ ವಿಲೇವಾರಿ ಮಾಡುವಂತೆ ಜಾಗೃತಿ ಮೂಡಿಸಲು ಸೂಚಿಸಿದರು.

➢ ಕೋವಿಡ್ ಟೆಸ್ಟ್ ಮಾಡಲು ಪ್ರಾ.ಆ.ಕೇಂ. ಇಲ್ಲಿ ಶೆಡ್ ನಿರ್ಮಾಣ ಮಾಡುವ ಬಗ್ಗೆ ಹಾಗೂ ಹೋಮ್ ಐಸೋಲೇಷನ್‌ಗೆ ಒಳಗಾದ ಕೊರೊನಾ ರೋಗಿಗಳಿಗೆ ಅವಶ್ಯಕ ಔಷಧಿಗಳನ್ನು ಒದಗಿಸುವ ಬಗ್ಗೆ ವೈದ್ಯಾಧಿಕಾರಿಗಳು ಪ್ರಸ್ತಾಪಿಸಿದರು.

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಕೋವಿಡ್ ನಿರ್ವಹಣೆಗಾಗಿ ಬಿಬಿಎಂಪಿಯ ಅನುದಾನದಡಿಯಲ್ಲಿ ಅನುವು ಮಾಡಿಕೊಡಲು ಸೂಚಿಸಿರುತ್ತಾರೆ. ಹಾಗೂ ಮಾನ್ಯ ಜಂಟಿ ಆಯುಕ್ತರು, ರಾ. ರಾ. ನಗರವರು ಕಛೇರಿ ಆದೇಶ ಹೊರಡಿಸಿದ್ದು, ನಗರ ಆರೋಗ್ಯ ಕೇಂದ್ರದಲ್ಲಿ ದಾಸ್ತಾನು ಲಭ್ಯವಿಲ್ಲದಿದ್ದಲ್ಲಿ, ಔಷಧಿಗಳನ್ನು ಎ.ಆರ್.ಎಸ್. ಹಣದಲ್ಲಿ ಖರೀದಿಸಲು ಸೂಚಿಸಿರುವುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

**2) ಬೀದಿ ನಾಯಿಗಳ ಬಗ್ಗೆ:-**

ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ಪರಿಮಿತಿಯಲ್ಲಿ ಬೀದಿ ನಾಯಿಗಳ ಕಾಟ ಅತಿಯಾಗಿದ್ದು, ಸಾರ್ವಜನಿಕರಿಗೆ ಇದರಿಂದ ತೊಂದರೆಯಾಗುತ್ತಿದ್ದು, ಇವುಗಳ ನಿಯಂತ್ರಣಕ್ಕಾಗಿ, ಬಿಬಿಎಂಪಿ ಪಶುಪಾಲನಾ ವಿಭಾಗರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

**3) ಬೀದಿ ದೀಪಗಳಿಗೆ ನಿರ್ವಹಣೆ ಕುರಿತು:-**

ಮಾನ್ಯ ಅಧ್ಯಕ್ಷರು ಮಾತನಾಡಿ, ಜೆ ಪಿ ಪಾರ್ಕ್ ವಾಡ್‌ನಲ್ಲಿ ಎಸ್.ಬಿ. ಎಂ. ಕಾಲೋನಿ, ಮುತ್ಯಾಲನಗರದ ರಸ್ತೆಗಳ ಬೀದಿ ದೀಪಗಳನ್ನು ನಿರ್ವಹಿಸಲು ಸಂಬಂಧಪಟ್ಟ ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ, ರಾ. ರಾ. ನಗರ ವಲಯ, ಬಿಬಿಎಂಪಿ ರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

**4) ಬ್ಲ್ಯಾಕ್ ಸ್ಪಾಟ್ (ಘನತ್ಯಾಜ್ಯ) ಗಳ ನಿರ್ವಹಣೆ ಹಾಗೂ ಬಯೋ ಮೆಡಿಕಲ್ ವೇಸ್ಟ್ ನಿರ್ವಹಣೆ ಕುರಿತು:-**

ಜೆ ಪಿ ಪಾರ್ಕ್ ವಾರ್ಡ್‌ನಲ್ಲಿ ತ್ಯಾಜ್ಯ ನಿರ್ವಹಣೆಯ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ವಾರ್ಡ್‌ನಲ್ಲಿ ಪ್ರತಿದಿನ ಕಸ ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ. ಹಾಗೂ ಬಯೋ ಮೆಡಿಕಲ್ ವೇಸ್ಟ್ ನಿರ್ವಹಣೆಯ ಬಗ್ಗೆ ಮೆಡಿಕೇರ್ ರವರ ಸಹಯೋಗದೊಂದಿಗೆ ಸಮರ್ಪಕವಾಗಿ ಕಾರ್ಯವನ್ನು ನಿರ್ವಹಿಸಿರುವುದಾಗಿ ತಿಳಿಸಿರುತ್ತಾರೆ.

ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, 'ಸಹಾಯ' ಕೋಶದಲ್ಲಿ ದಾಖಲಾಗಿರುವ ಆರೋಗ್ಯ ಇಲಾಖೆಗೆ ಸಂಬಂಧಿಸಿದ ಸಾರ್ವಜನಿಕರ ದೂರುಗಳನ್ನು ವಿಲೇ ಮಾಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿರುತ್ತಾರೆ.

ಪು.ತಿ.ನೋ....3

Scanned with CamScanner

5) ಕಾಮಗಾರಿ ಇಲಾಖೆ:-

- 'ಸಹಾಯ 2.0' ಕೋಶದಲ್ಲಿ ದಾಖಲಾಗುವ ಸಾರ್ವಜನಿಕರ ದೂರುಗಳನ್ನು ವಿಲೇ ಮಾಡುವ ಬಗ್ಗೆ ಚರ್ಚಿಸಲಾಗಿದ್ದು, ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ದೂರುಗಳು ಬಾಕಿ ಇದ್ದು, ಇದರ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ, 'ಸಹಾಯ' ಕೋಶದಲ್ಲಿ ಒಟ್ಟು 21 ದೂರುಗಳಲ್ಲಿ 11 ದೂರುಗಳನ್ನು ಪರಿಹರಿಸಿದ್ದು, ಉಳಿದವುಗಳಲ್ಲಿ 03 ದೀರ್ಘಾವಧಿ, 02 ಪ್ರಗತಿಯಲ್ಲಿದ್ದು, ಮತ್ತು 07 ಇತ್ತೀಚಿನ ದೂರುಗಳನ್ನು ಶೀಘ್ರವಾಗಿ ಪರಿಹರಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

6) Pay & Use ಶೌಚಾಲಯ ನಿರ್ವಹಣೆಯ, ಬಿಬಿಎಂಪಿ ಶಾಲೆ ಶೌಚಾಲಯ ಮತ್ತು ನೀರು ಸರಬರಾಜು ನಿರ್ವಹಣೆಯ ಬಗ್ಗೆ ಹಾಗೂ ಈಜುಕೊಳದ ಪಕ್ಕದಲ್ಲಿರುವ ಆಸ್ಪತ್ರೆಯ ಮುಂದೆ ಮಳೆ ನೀರಿನ ಸಮರ್ಪಕ ನಿರ್ವಹಣೆಯ ಬಗ್ಗೆ:-

Pay & Use ಶೌಚಾಲಯ ನಿರ್ವಹಣೆಯ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ಸಮರ್ಪಕವಾಗಿ ನಿರ್ವಹಿಸುವುದಾಗಿ ತಿಳಿಸಿರುತ್ತಾರೆ.

ಮಾನ್ಯ ಅಧ್ಯಕ್ಷರು ಮಾತನಾಡಿ, ಈಜುಕೊಳದ ಪಕ್ಕದಲ್ಲಿರುವ ಆಸ್ಪತ್ರೆಯ ಮುಂದೆ ಮಳೆ ನೀರಿನ ಸಮರ್ಪಕ ನಿರ್ವಹಣೆಯ ಕುರಿತು ಸಂಬಂಧಪಟ್ಟ ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿರುತ್ತಾರೆ.

7) ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಿಸುವ ಬಗ್ಗೆ:-

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಅಭಿಯಂತರರು (ಬೆಸ್ಕಾಂ) ರವರು 07 ದಿನದ ಒಳಗಾಗಿ ಕ್ರಮವಹಿಸಲು ಸೂಚಿಸಿರುತ್ತಾರೆ.

8) ಪೌರ ಕಾರ್ಮಿಕರಿಗೆ ಊಟದ ವ್ಯವಸ್ಥೆ, ಮಾಸ್ಕ್ ಮತ್ತು ಕೈಗವಸುಗಳನ್ನು ಸಮರ್ಪಕವಾಗಿ ಒದಗಿಸುವ ಕುರಿತು. ಹಾಗೂ ಸ್ಟ್ರೀಟ್ ಸ್ವೀಪಿಂಗ್ ವಾಹನಗಳನ್ನು ಒದಗಿಸುವ ಕುರಿತು:-

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಕೂಡಲೇ ಕ್ರಮವಹಿಸಲು ಸೂಚಿಸಿರುತ್ತಾರೆ.

9) ಜೆ ಪಿ ಪಾರ್ಕ್‌ನಲ್ಲಿರುವ ಜಿಮ್ ಉಪಕರಣಗಳಿಗೆ ಸ್ಯಾನಿಟೈಝರ್ ಸಿಂಪಡಣೆ ಹಾಗೂ ಕೆರೆ ನಿರ್ವಹಣೆ ಬಗ್ಗೆ:-

ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ವಿಷಯದ ಬಗ್ಗೆ ಸಂಬಂಧಪಟ್ಟ ತೋಟಗಾರಿಕೆ ಇಲಾಖೆ, ಬಿಬಿಎಂಪಿರವರಿಗೆ ಕೂಡಲೇ ಕ್ರಮವಹಿಸಲು ನಿರ್ದೇಶಿಸುತ್ತೇನೆಂದು ಸಭೆಗೆ ತಿಳಿಸಿರುತ್ತಾರೆ.

ಮು.ತಿ.ನೋ....4

Scanned with CamScanner

10) ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಸುವ ಬಗ್ಗೆ:-

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಅಭಿಯಂತರರು (ಬೆಸ್ಕಾಂ) ರವರು 07 ದಿನದ ಒಳಗಾಗಿ ಕ್ರಮವಹಿಸಲು ಸೂಚಿಸಿರುತ್ತಾರೆ.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

(ಅಜಗಣ್ಣಯ್ಯ ಸ್ವಾಮಿ)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

(ಎ. ಬಿ. ದೊಡ್ಡಯ್ಯ)
ಮುಖ್ಯ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17

Scanned with CamScanner